# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 748

ಸದಸ್ಯರ ಹೆಸರು : ಶ್ರೀ ಮಂಜುನಾಥ್ ಭಂಡಾರಿ ( ಸ್ಥಳೀಯ ಸಂಸ್ಥೆಗಳ ಕ್ಷೇತ್ರ )

ಉತ್ತರಿಸ ಬೇಕಾದ ದಿನಾಂಕ : 12.12.2025

ಉತ್ತರಿಸುವ ಸಚಿವರು : ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಸಚಿವರು.

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಸರಕಾರಿ ಹಾಗೂ ಖಾಸಗಿ ಸೇರಿ ಒಟ್ಟು ಎಷ್ಟು ವಿಶೇಷ ಮಕ್ಕಳ ಶಾಲೆಗಳು ಮತ್ತು ಕಾಳಜಿ ಕೇಂದ್ರಗಳಿವೆ; ಅವುಗಳನ್ನು ಯಾರ್ಯಾರು ಮತ್ತು ಯಾವ್ಯಾವ ಸಂಘ ಸಂಸ್ಥೆಗಳು ನಡೆಸುತ್ತಿವೆ; ಈ ಸಂಸ್ಥೆಗಳಿಗೆ ಸರ್ಕಾರದಿಂದ ಎಷ್ಟು ಅನುದಾನ ನೀಡಲಾಗುತ್ತಿದೆ; ಅದನ್ನು ಯುಕ್ತ ಸಮಯದಲ್ಲಿ ನೀಡಲಾಗುತ್ತಿದೆಯೇ; ನೀಡದಿದ್ದರೆ ಅದಕ್ಕೆ ಕಾರಣಗಳೇನು: | ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆಯ ವತಿಯಿಂದ ಒಟ್ಟು 09 ಸರ್ಕಾರಿ ವಿಶೇಷ ಶಾಲೆಗಳು ನಡೆಯುತ್ತಿದೆ ಹಾಗೂ ಅಂಗವಿಕಲ ಮಕ್ಕಳ ವಿಶೇಷ ಶೈಕ್ಷಣಿಕ ಯೋಜನೆಯಡಿ 164 ವಿಶೇಷ ಶಾಲೆಗಳನ್ನು ಸ್ವಯಂ ಸೇವಾ ಸಂಸ್ಥೆಗಳ ಮೂಲಕ ನಡೆಸಲಾಗುತ್ತಿದ್ದು, 1982ರ ರಾಜ್ಯ ಅನುದಾನ ಸಂಹಿತೆಯಡಿ 33 ವಿಶೇಷ ಶಾಲೆಗಳನ್ನು ಸ್ವಯಂ ಸೇವಾ ಸಂಸ್ಥೆಗಳ ಮೂಲಕ ನಡೆಸಲಾಗುತ್ತಿದೆ.<br><br>2025-26ನೇ ಸಾಲಿನಲ್ಲಿ ಸರ್ಕಾರದ ವತಿಯಿಂದ ಒಟ್ಟು 09 ಸರ್ಕಾರಿ ವಿಶೇಷ ಶಾಲೆಗಳ ನಿರ್ವಹಣೆಗಾಗಿ ರೂ.4.35 ಕೋಟಿಗಳು, ಅಂಗವಿಕಲ ಮಕ್ಕಳ ವಿಶೇಷ ಶೈಕ್ಷಣಿಕ ಯೋಜನೆಯಡಿ ವಿಶೇಷ ಶಾಲೆಗಳ ನಿರ್ವಹಣೆಗಾಗಿ ರೂ.88.00 ಕೋಟಿಗಳು ಹಾಗೂ 1982ರ ರಾಜ್ಯ ಅನುದಾನ ಸಂಹಿತೆಯಡಿ ನಡೆಯುತ್ತಿರುವ ವಿಶೇಷ ಶಾಲೆಗಳ ನಿರ್ವಹಣೆಗಾಗಿ ರೂ.20.75 ಕೋಟಿ ಅನುದಾನ ನಿಗದಿ ಪಡಿಸಲಾಗಿರುತ್ತದೆ.<br><br>ಆರ್ಥಿಕ ಇಲಾಖೆಯಿಂದ ಪ್ರತಿ ತ್ರೈಮಾಸಿಕಕ್ಕೆ ಒಂದು ಬಾರಿ ಅನುದಾನ ಬಿಡುಗಡೆಯಾಗುತ್ತಿದ್ದು, ಅದರಂತೆ ಮೇಲಿನ ವಿವಿಧ ಯೋಜನೆಗಳ ವಿಶೇಷ ಶಾಲೆಗಳಿಗೆ ಅನುದಾನ ಬಿಡುಗಡೆ ಮಾಡಲಾಗುತ್ತಿದೆ. |
| ಆ) | ವಿಶೇಷ ಮಕ್ಕಳ ಶಾಲೆಗಳ ಸಿಬ್ಬಂದಿಗೆ ಮೂರ್ನಾಲ್ಕು ತಿಂಗಳಿಗೊಮ್ಮೆ ಗೌರವಧನ ನೀಡಲಾಗುತ್ತಿರುವುದು ನಿಜವೇ; ಅದಕ್ಕೆ ಕಾರಣವೇನು; ಅದನ್ನು ಪ್ರತಿ ತಿಂಗಳಿಗೆ ನೀಡುವ ಬಗ್ಗೆ ಸರ್ಕಾರ ಯಾವ ರೀತಿ ಕ್ರಮವಹಿಸಿದೆ; | ವಿಶೇಷ ಮಕ್ಕಳ ಶಾಲೆಗಳ ಸಿಬ್ಬಂದಿಗೆ ಮೂರ್ನಾಲ್ಕು ತಿಂಗಳಿಗೊಮ್ಮೆ ಗೌರವಧನ ನೀಡಲಾಗುತ್ತಿದೆ.<br><br>ಅನುದಾನವು ಪ್ರತಿ ತ್ರೈಮಾಸಿಕ ಒಂದು ಬಾರಿ ಆರ್ಥಿಕ ಇಲಾಖೆಯಿಂದ ಇಲಾಖೆಗೆ ಬಿಡುಗಡೆಯಾಗುವುದರಿಂದ ಅಂಗವಿಕಲ ಮಕ್ಕಳ ವಿಶೇಷ ಶೈಕ್ಷಣಿಕ ಯೋಜನೆಯಡಿ ಸ್ವಯಂ ಸೇವಾ ಸಂಸ್ಥೆಗಳಿಗೆ ತ್ರೈಮಾಸಿಕ ಕಂತಿನಂತೆ ಅನುದಾನ ಬಿಡುಗಡೆ ಮಾಡಲಾಗುತ್ತಿದೆ.<br><br>ಪ್ರತಿ ತಿಂಗಳು ಸಿಬ್ಬಂದಿಗಳಿಗೆ ವೇತನವನ್ನು ಸಕಾಲದಲ್ಲಿ ಪಾವತಿಸುವಂತೆ ಸ್ವಯಂಸೇವಾ ಸಂಸ್ಥೆಗಳಿಗೆ ನಿರ್ದೇಶನ ನೀಡಲಾಗಿರುತ್ತದೆ. |

| | | |
|---|---|---|
| ಇ) | ಸುಮಾರು 1500 ವಿಶೇಷ ಮಕ್ಕಳ ಶಾಲೆಗಳ ಸಿಬ್ಬಂದಿಗೆ ಸಮಾನ ಕೆಲಸಕ್ಕೆ ಸಮಾನ ವೇತನ ಸಿಗದಿರಲು ಕಾರಣವೇನು: ರಾಜ್ಯದಲ್ಲಿನ ಸ್ವಯಂ ಸೇವಾ ಸಂಸ್ಥೆಗಳಿಂದ ನಡೆಸಲ್ಪಡುವ ವಿಶೇಷಚೇತನ ಶಾಲೆಗಳ ಶಿಕ್ಷಕರು ಮತ್ತು ಶಿಕ್ಷಕೇತರ ಸಿಬ್ಬಂದಿ ತಮ್ಮ ನ್ಯಾಯ ಸಮ್ಮತ ಬೇಡಿಕೆಗಳಿಗಾಗಿ ಹಲವು ವರ್ಷಗಳಿಂದ ಹೋರಾಟ ನಡೆಸಿಕೊಂಡು ಬರುತ್ತಿದ್ದು, ಇದುವರೆಗೆ ಅವರ ಬೇಡಿಕೆ ಈಡೇರಿಸಲು ಸರ್ಕಾರ ಸಮರ್ಪಕವಾಗಿ ಸ್ಪಂದಿಸದಿರಲು ಕಾರಣವೇನು: | 1. 1982ರ ರಾಜ್ಯ ಅನುದಾನ ಸಂಹಿತೆಯಡಿ ನಡೆಯುತ್ತಿರುವ ವಿಶೇಷ ಶಾಲೆಗಳ ಶಿಕ್ಷಕರಿಗೆ ಶಿಕ್ಷಣ ಇಲಾಖೆಯಂತೆ ವೇತನ ಪಾವತಿಸಲಾಗುತ್ತಿದೆ. 2010ರಿಂದ ಈ ಯೋಜನೆಯಡಿ ಹೊಸ ಶಾಲೆಗಳನ್ನು ಪ್ರಾರಂಭಿಸಲು ಅನುಮೋದನೆ ನೀಡಲಾಗುತ್ತಿಲ್ಲ.<br>2. 2010ರಿಂದ ಅಂಗವಿಕಲ ಮಕ್ಕಳ ವಿಶೇಷ ಶೈಕ್ಷಣಿಕ ಯೋಜನೆಯಡಿ ವಿಶೇಷ ಶಾಲೆಗಳನ್ನು ಪ್ರಾರಂಭಿಸಲು ಯೋಜನೆಯನ್ನು ರೂಪಿಸಿದ್ದು, ಯೋಜನಾ ಮಾರ್ಗಸೂಚಿಯಂತೆ ಪ್ರತಿ ಮಗುವಿಗೆ ಅನುದಾನವನ್ನು ನೀಡಲಾಗುತ್ತಿದೆ. ಈ ಅನುದಾನದಡಿ ಶಾಲಾ ಶಿಕ್ಷಕರುಗಳಿಗೆ ವೇತವವನ್ನು ಪಾವತಿಸಲಾಗುತ್ತಿದೆ. |
| ಈ) | ಸ್ವಯಂ ಸೇವಾ ಸಂಸ್ಥೆಗಳಿಂದ ನಡೆಸಲ್ಪಡುವ ವಿಶೇಷ ಚೇತನ ಮಕ್ಕಳ ಶಿಕ್ಷಕರು ಮತ್ತು ಶಿಕ್ಷಕೇತರ ಶಾಲೆಗಳ ಸಿಬ್ಬಂದಿ ಸರ್ಕಾರಿ ವ್ಯವಸ್ಥೆಯಡಿ ವೇತನ, ಸೌಲಭ್ಯ ನೀಡಲು ಆಗ್ರಹಿಸುತ್ತಿದ್ದು ಈ ಕುರಿತಂತೆ ಸರ್ಕಾರದ ಮಟ್ಟದಲ್ಲಿ ಪರಿಶೀಲನೆ ಯಾವ ಹಂತದಲ್ಲಿದೆ: ಯಾವಾಗ ಈ ಕುರಿತಂತೆ ಅಂತಿಮ ತೀರ್ಮಾನ ಕೈಗೊಳ್ಳಲಾಗುವುದು? | 1982ರ ರಾಜ್ಯ ಅನುದಾನ ಸಂಹಿತೆಯಡಿ ನಡೆಯುತ್ತಿರುವ ವಿಶೇಷ ಶಾಲೆಗಳಲ್ಲಿ ಶಿಕ್ಷಕೇತರ ಸಿಬ್ಬಂದಿಗಳಿಗೆ ಸರ್ಕಾರಿ ವ್ಯವಸ್ಥೆಯಡಿ ವೇತನ/ಪಿಂಚಣಿ ಸೌಲಭ್ಯವನ್ನು ನೀಡಲಾಗುತ್ತಿದೆ.<br>ಅಂಗವಿಕಲ ಮಕ್ಕಳ ವಿಶೇಷ ಶೈಕ್ಷಣಿಕ ಯೋಜನೆಯಡಿ ಸ್ವಯಂ ಸೇವಾ ಸಂಸ್ಥೆಗಳಿಗೆ ನೀಡಲಾಗುವ ಅನುದಾನವನ್ನು ದಿನಾಂಕ:14-09-2022ರಂದು ಹೆಚ್ಚಳ ಮಾಡಲಾಗಿರುತ್ತದೆ. ಈ ಮಾರ್ಗಸೂಚಿಯನ್ವಯ ಮಕ್ಕಳ ಸಂಖ್ಯೆಗೆ ಅನುಗುಣವಾಗಿ ಅನುದಾನ ಬಿಡುಗಡೆ ಮಾಡಲಾಗುತ್ತಿದೆ. |

**ಸಂಖ್ಯೆ:** ಮಮಇ 403 ಪಿಹೆಚ್‌ಪಿ 2025

**(ಲಕ್ಷ್ಮೀ ಆರ್. ಹೆಬ್ಬಾಳಕರ್)**

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ
ಹಾಗೂ ಹಿರಿಯ ನಾಗರಿಕರ
ಸಬಲೀಕರಣ ಸಚಿವರು